**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ಕೆ.ಆರ್.ನಗರ**

**ಸಿ.ಸಿ.ಸಂಖ್ಯೆಃ 2/2025**

**ಪಿರ್ಯಾದುದಾರರುಃ** ಶ್ರೀ ಸಚಿನ್ ಕುಮಾರ್ ಕೆ.ಎಸ್.

**--ವಿರುದ್ಧ --**

**ಆರೋಪಿಃ** ಶ್ರೀ ನಾಗೇಶ

**ಆ ಪಾ ದ ನೆ**

ಆರೋಪಿತರಾದ ನೀವು ಪಿರ್ಯಾದುದಾರರಿಗೆ ಕಾನೂನುಬದ್ಧವಾಗಿ ಪಾವತಿ ಮಾಡಬೇಕಾದ ರೂ.2,38,700/- ಗಳ ಮರುಪಾವತಿಗಾಗಿ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಕೆ.ಆರ್.ನಗರ ಶಾಖೆಯ ಚೆಕ್ ನಂಃ 080971, ದಿನಾಂಕಃ 22.10.2024 ರೂ.2,38,700/- ಎಂದು ನಮೂದಿಸಿ ಚೆಕ್ಕನ್ನು ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಖಾತೆಯನ್ನು ಹೊಂದಿರುವ ನವನಗರ ಅರ್ಬನ್ ಕೋಆಪರೇಟಿವ್ ಬ್ಯಾಂಕ್ ಲಿಮಿಟೆಡ್, ಕೆ.ಆರ್.ನಗರ ಶಾಖೆ ಇಲ್ಲಿ ನಗದೀಕರಿಸಲು ಹಾಜರುಪಡಿಸಿದಾಗ, ಸದರಿಯವರು ನಿಮ್ಮ ಖಾತೆಯಲ್ಲಿ "**Payment Stopped by Drawer**" ಎಂಬ ಹಿಂಬರಹದೊಂದಿಗೆ ಚೆಕ್ಕು ಅಮಾನ್ಯಗೊಂಡಿದ್ದು, ಆ ಬಗ್ಗೆ ಸದರಿ ಬ್ಯಾಂಕಿನವರು ದಿನಾಂಕ 24.10.2024 ರಂದು ಹಿಂಬರಹವನ್ನು ನೀಡಿದ್ದು, ನಂತರ ಪಿರ್ಯಾದುದಾರರು ತಮ್ಮ ವಕೀಲರ ಮುಖಾಂತರ ದಿನಾಂಕಃ 20.11.2024 ರಂದು ಬರವಣಿಗೆ ರೂಪದಲ್ಲಿ ತಿಳುವಳಿಕೆ ಪತ್ರವನ್ನು ಕಳುಹಿಸಿದ್ದರೂ ಸಹ ಚೆಕ್ಕಿನಲ್ಲಿರುವ ಹಣವನ್ನು ಮರುಪಾವತಿ ಮಾಡಿರುವುದಿಲ್ಲ, ಆ ಕಾರಣ ನೀವು ವರ್ಗಾವಣೀಯ ಲಿಖಿತಗಳ ಅಧಿನಿಯಮ ಕಲಂ 138 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧ ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿದ್ದೀರೆಂದು ಆಪಾದಿಸಲಾಗಿದೆ.

ಪ್ರಶ್ನೆಃ-1 ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರಃ

ಪ್ರಶ್ನೆ-2 ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೆ?

ಉತ್ತರಃ

(ದಿನಾಂಕ 03.04.2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ಧೃಡೀಕರಿಸಿದೆ)

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಕೆ ಆರ್ ನಗರ.

Aravindra B C

Digitally signed by Aravindra B C
Date: 2025.04.15 12:43:23 +0530